ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	159
ಸದಸ್ಯರ ಹೆಸರು	:	ಶ್ರೀ ಅ.ದೇವೇಗೌಡ(ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	21-09-2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಸಂಖ್ಯೆ ಎಷ್ಟು;	ಒಟ್ಟು 2699
ಆ)	ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇದ್ದ 1203 ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗೆ 2015ರಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಿ 2019ರಲ್ಲಿ ಅಂತಿಮ ಆಯ್ಕೆಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಭ್ಯರ್ಥಿಗಳಿಗೆ 2020ರ ಆಗಸ್ಟ್-ಸೆಪ್ಟೆಂಬರ್‌ನಲ್ಲಿ ಆನ್‌ಲೈನ್ ಕೌನ್ಸೆಲಿಂಗ್ ನಡೆಸಿ ಸ್ಥಳನಿಯುಕ್ತಿಗೊಳಿಸಲಾಗಿದೆ. ಮುಂದುವರೆದು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಕಾರ್ಯಭಾರ ಕಡಿಮೆ ಇರುವ ಸರ್ಕಾರಿ/ಅನುದಾನಿತ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳನ್ನು ನಿಯೋಜಿಸಿ ಕಾರ್ಯಭಾರವನ್ನು ಸರಿದೂಗಿಸಲಾಗುತ್ತಿದೆ. ಮಿಕ್ಕುಳಿದ ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರುಗಳನ್ನು ನೇಮಕ ಮಾಡುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಇಪಿ 116 ಡಿಜಿಡಬ್ಲ್ಯೂ 2020

S. Su

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.